# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 410 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಡಾ:ಎಂ.ಜಿ ಮುಳೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 10.03.2025. |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ, ಇಲಾಖಾ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಅಂಗಡಿಗಳು ಮತ್ತು ರಸ್ತೆ ಬದಿ ವ್ಯಾಪಾರಿಗಳು ಉಪಯೋಗಿಸುವ ತೂಕ ಮಾಡುವ ಯಂತ್ರಗಳು ಅನೇಕ ಕಡೆಗಳಲ್ಲಿ ದೋಷಪೂರಿತವಾಗಿದ್ದು ಇದರಿಂದ ಗ್ರಾಹಕರಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಬಂದಿದೆ. |
| (ಆ) | ವ್ಯಾಪಾರಿಗಳು ಉಪಯೋಗಿಸುವ ತೂಕದ ಯಂತ್ರಗಳನ್ನು ತನಿಖೆ ಮಾಡಿ ಕ್ರಮ ಕೈಗೊಳ್ಳಲು ಕಾನೂನು ಮಾಪನಶಾಸ್ತ್ರ, ಇಲಾಖೆಯಲ್ಲಿ ಯಾವ ರೀತಿ ವ್ಯವಸ್ಥೆ ಇದೆ; | ವ್ಯಾಪಾರಿಗಳು ಬಳಸುವ ತೂಕ ಮತ್ತು ಅಳತೆ ಸಾಧನಗಳನ್ನು ಇಲಾಖಾ ಕ್ಷೇತ್ರಾಧಿಕಾರಿಗಳು ದಿ ಲೀಗಲ್ ಮೆಟ್ರಾಲಜಿ ಕಾಯಿದೆ 2009ರ ಸೆಕ್ಷನ್ 15 ರಡಿಯಲ್ಲಿ ತಪಾಸಣೆಯನ್ನು ಕೈಗೊಳ್ಳುತ್ತಾರೆ. ಒಂದು ವೇಳೆ ತೂಕ ಮತ್ತು ಅಳತೆ ಸಾಧನಗಳಲ್ಲಿ ದೋಷಗಳು ಕಂಡು ಬಂದಲ್ಲಿ ನಿಯಮಾನುಸಾರ ಮೊಕದ್ದಮೆಯನ್ನು ಹೂಡಿ ಸದರಿಯವರಿಂದ ಅಭಿಸಂಧಾನ ಶುಲ್ಕವನ್ನು ವಸೂಲು ಮಾಡಲಾಗುತ್ತಿದೆ. ಅಭಿಸಂಧಾನ ಮಾಡಲಾಗದ ಪ್ರಕರಣಗಳಿಗೆ ಸಂಬಂಧಿಸಿದಂತೆ ತೂಕ ಮತ್ತು ಅಳತೆಗಳ ಕಾಯಿದೆಯ ಅನುಸಾರವಾಗಿ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಮುಂದುವರೆದು, ಹೊಸ, ನಿಯಮಿತ ಹಾಗೂ ದೋಷಪೂರಿತ ತೂಕ ಮತ್ತು ಅಳತೆ ಸಾಧನಗಳನ್ನು ದಿ ಲೀಗಲ್ ಮೆಟ್ರಾಲಜಿ ಕಾಯಿದೆ 2009ರ ಕಲಂ 24ರಡಿಯಲ್ಲಿ ಸತ್ಯಾಪನೆ ಮತ್ತು ಮುದ್ರೆ ಮಾಡಿ ವ್ಯಾಪಾರಸ್ಥರಿಗೆ ವ್ಯಾಪಾರಕ್ಕೆ ಉಪಯೋಗಿಸಿಕೊಳ್ಳಲು ನೀಡಲಾಗುತ್ತಿದೆ. |
| (ಇ) | ರಾಜ್ಯದಲ್ಲಿ ಇದೂವರೆಗೆ ಎಷ್ಟು ಕಡೆಗಳಲ್ಲಿ ವ್ಯಾಪಾರಿಗಳ ತೂಕದ ಯಂತ್ರಗಳನ್ನು ತಪಾಸಣೆ ಮಾಡಲಾಗಿದೆ ಮತ್ತು ಎಷ್ಟು ವ್ಯಾಪಾರಸ್ತರ ಮೇಲೆ ಕ್ರಮ ಕೈಗೊಳ್ಳಲಾಗಿದೆ ?(ಕಳೆದ ಮೂರು ವರ್ಷಗಳ ಮಾಹಿತಿ ನೀಡುವುದು) | ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ತಪಾಸಣೆ ನಡೆಸಿ, ತಪ್ಪಿತಸ್ಥರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಂಡಿರುವ ಪ್ರಕರಣಗಳ ಅಂಕಿ ಅಂಶಗಳು ಈ ಕೆಳಕಂಡಂತಿದೆ. |

| ವರ್ಷ | ನಡೆಸಲಾದ ತಪಾಸಣೆಗಳ ಸಂಖ್ಯೆ | ಹೂಡಲಾದ ಮೊಕದ್ದಮೆಗಳ ಸಂಖ್ಯೆ | ಸಂಗ್ರಹಿಸಲಾದ ಅಭಿಸಂಧಾನ ಶುಲ್ಕ(ರೂ.ಗಳಲ್ಲಿ) |
|---|---|---|---|
| 2021-22 | 89,281 | 26,431 | 6,62,83,745 |
| 2022-23 | 80,709 | 25,303 | 6,79,62,700 |
| 2023-24 | 73,876 | 16,806 | 6,06,21,750 |
| **ಒಟ್ಟು** | **2,43,866** | **68,540** | **19,48,68,195** |

ಆನಾಸ 24 ಕಾಮಾಸೇ 2025

(ಕೆ.ಹೆಚ್ ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು
ಮಾಪನಶಾಸ್ತ್ರ, ಇಲಾಖಾ ಸಚಿವರು.